ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 8/9/2020

# ಅಧಿವೇಶನಕ್ಕೆ ಮಂತ್ರಿಗಳ ಗುರಾಣಿ

- ಸಚಿವರುಗಳ ಜೊತೆ ಸಿಎಂ ಚರ್ಚೆ
- ಟೀಕೆಗಳಿಗೆ ಪ್ರತ್ಯುತ್ತರ ನೀಡಲು ಸಲಹೆ

**ಸಂ.ಕ.ಸಮಾಚಾರ, ಬೆಂಗಳೂರು** 8/9/20

ಈ ತಿಂಗಳ 21ರಿಂದ ಆರಂಭವಾಗಲಿರುವ ವಿಧಾನಮಂಡಲದ ಮಳೆಗಾಲದ ಅಧಿವೇಶನದಲ್ಲಿ ವಿಪಕ್ಷಗಳ ಏಟಿಗೆ ಎದುರೇಟು ನೀಡಲು ಅನುಸರಿಸಬೇಕಾದ ಕಾರ್ಯತಂತ್ರಗಳ ಕುರಿತು ಮುಖ್ಯಮಂತ್ರಿ ಯಡಿಯೂರಪ್ಪ ಸೋಮವಾರ ಸಂಪುಟ ಸಹೋದ್ಯೋಗಿಗಳೊಂದಿಗೆ ವಿಸ್ತೃತ ಚರ್ಚೆ ನಡೆಸಿದರು.

ಬಿಜೆಪಿ ಸರ್ಕಾರ ರಚನೆಯಾದ ಬಳಿಕ ಇದೇ ಮೊದಲಬಾರಿಗೆ ಸಂಪುಟ ಸಭೆಯನ್ನು ಹೊರತುಪಡಿಸಿ ಸಚಿವರೊಡನೆ ಗೃಹ ಕಚೇರಿ ಕೃಷ್ಣಾದಲ್ಲಿ ಔಪಚಾರಿಕ ಸಭೆ ನಡೆಸಿದ ಮುಖ್ಯಮಂತ್ರಿಗಳು ಅಧಿವೇಶನಕ್ಕೆ ಸಜ್ಜಾಗುವ ಕುರಿತು ಸುದೀರ್ಘ ಸಮಾಲೋಚನೆ ನಡೆಸಿದರು.

ಮಳೆಗಾಲದ ಅಧಿವೇಶನದಲ್ಲಿ ವಿವಾದಿತ ಎಪಿಎಂಸಿ ಕಾಯ್ದೆ ತಿದ್ದುಪಡಿ, ಭೂ ಸುಧಾರಣಾ ಕಾಯ್ದೆ ತಿದ್ದುಪಡಿ ಮತ್ತಿತರ ವಿಧೇಯಕಗಳು ಮಂಡನೆಯಾಗುತ್ತಿರುವುದರಿಂದ ಪ್ರತಿಪಕ್ಷಗಳಿಂದ ಎದುರಾಗಬಹುದಾದ ಟೀಕೆ-ಆರೋಪಗಳಿಗೆ ತಕ್ಕುದಾದ ಪ್ರತ್ಯುತ್ತರ ನೀಡುವ ಕುರಿತು ಸಚಿವರಿಗೆ ಮುಖ್ಯಮಂತ್ರಿಗಳು ಹಲವು ಉಪಯುಕ್ತ ಸಲಹೆಗಳನ್ನು ನೀಡಿದರು.

ಕೊರೊನಾ ತಡೆಗೆ ಹಾಗೂ ಪ್ರವಾಹ ಪರಿಸ್ಥಿತಿ ನಿರ್ವಹಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳ ಕುರಿತು ಸದನದಲ್ಲಿ ಅಂಕಿ-ಅಂಶ ಸಮೇತ ವಿವರ ಪ್ರಸ್ತುಪಡಿಸುವಂತೆ ಮುಖ್ಯಮಂತ್ರಿಗಳು ಸಚಿವರಿಗೆ ಸೂಚನೆ ನೀಡಿದರೆಂದು ಉನ್ನತ ಮೂಲಗಳು ತಿಳಿಸಿವೆ. ಇದೇ ವೇಳೆ ಮಾದಕ ದ್ರವ್ಯ ಪ್ರಕರಣ, ಡಿ.ಜೆ. ಹಳ್ಳಿ ಗಲಭೆಗೆ ಸಂಬಂಧಿಸಿದಂತೆಯೂ ಸಭೆಯಲ್ಲಿ ಚರ್ಚೆ ನಡೆಯಿತೆಂದು ತಿಳಿದುಬಂದಿದೆ.

## ಆರು ಸಚಿವರ ಅನುಪಸ್ಥಿತಿ

ಮುಖ್ಯಮಂತ್ರಿ ಯಡಿಯೂರಪ್ಪ ಅವರು ಸೋಮವಾರ ಕರೆದಿದ್ದ ಸಚಿವರ ಸಭೆಗೆ ಆರು ಸಚಿವರು ಗೈರಾಗಿದ್ದರು. ಸಚಿವರಾದ ಕೆ.ಎಸ್.ಈಶ್ವರಪ್ಪ, ಶಿವರಾಮ್ ಹೆಬ್ಬಾರ್ ಶಶಿಕಲಾ ಜೊಲ್ಲೆ ಹಾಗೂ ಕೊರೊನಾ ಪೀಡಿತರಾಗಿ ಚಿಕಿತ್ಸೆ ಪಡೆಯುತ್ತಿರುವ ಹಿನ್ನೆಲೆಯಲ್ಲಿ ಸಭೆಗೆ ಆಗಮಿಸಿರಲಿಲ್ಲ. ಇನ್ನೂ ಆನಂದ್‌ಸಿಂಗ್ ಸಹ ಅನಾರೋಗ್ಯದಿಂದಾಗಿ ಸಭೆಗೆ ಬಂದಿರಲಿಲ್ಲ. ಸಚಿವರಾದ ಸುರೇಶ್‌ಕುಮಾರ್ ಮತ್ತು ಬೈರತಿ ಬಸವರಾಜ್ ಅವರು ಜಿಲ್ಲಾ ಪ್ರವಾಸದಲ್ಲಿರುವುದರಿಂದ ಸಭೆಯಲ್ಲಿ ಪಾಲ್ಗೊಂಡಿರಲಿಲ್ಲ. ಇನ್ನುಳಿದಂತೆ ಸಭೆಯಲ್ಲಿ 25 ಸಚಿವರು ಭಾಗಿಯಾಗಿದ್ದರು.